**ಕರ್ನಾಟಕ ಸರ್ಕಾರ**

ಸಂಖ್ಯೆ:AGRI-ACT/147/2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು ದಿನಾಂಕ:17-02-2023.

## ಸುತ್ತೋಲೆ

ರಾಜ್ಯ ಸರ್ಕಾರದ ವಿವಿಧ ಯೋಜನೆಗಳಡಿಯಲ್ಲಿ ಸಿರಿಧಾನ್ಯಗಳ ಉತ್ಪಾದನೆ ಮತ್ತು ಬಳಕೆಯನ್ನು ಉತ್ತೇಜಿಸುವ ಸಲುವಾಗಿ ಹಾಗೂ ಸಿರಿಧಾನ್ಯಗಳಿಗೆ ದೇಶೀಯ ಮತ್ತು ಜಾಗತಿಕ ಬೇಡಿಕೆಯನ್ನು ಸೃಷ್ಟಿಸಲು ಮತ್ತು ಜನರಿಗೆ ಪೌಷ್ಟಿಕಾಂಶದ ಆಹಾರವನ್ನು ಒದಗಿಸಲು ಅಂತರರಾಷ್ಟ್ರೀಯ ಸಿರಿಧಾನ್ಯಗಳ ವರ್ಷ ಎಂದು ಘೋಷಿಸಲು ವಿಶ್ವಸಂಸ್ಥೆಗೆ ಭಾರತ ಸರ್ಕಾರವು 2021 ರಲ್ಲಿ ಪ್ರಸ್ತಾಪಿಸಿದ ಮೇರೆಗೆ ವಿಶ್ವಸಂಸ್ಥೆಯು **"2023 ನೇ ವರ್ಷವನ್ನು ಅಂತರರಾಷ್ಟ್ರೀಯ ಸಿರಿಧಾನ್ಯಗಳ ವರ್ಷ"** ಎಂದು ಘೋಷಿಸಿರುತ್ತದೆ.

ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಸಹಯೋಗದಿಂದ ಸಿರಿಧಾನ್ಯಗಳ ಉತ್ಪಾದನೆ ಮತ್ತು ಬಳಕೆಗೆ ಹಲವಾರು ಕಾರ್ಯಕ್ರಮಗಳನ್ನು ಕೃಷಿ ಇಲಾಖೆಯು ರೂಪಿಸುತ್ತಿದೆ. "ಅಂತರಾಷ್ಟ್ರೀಯ ಸಿರಿಧಾನ್ಯಗಳ ವರ್ಷ-2023" ವನ್ನು ಅರ್ಥಪೂರ್ಣವಾಗಿ ಹಾಗೂ ಯಶಸ್ವಿಯಾಗಿ ಆಚರಿಸುವ ಸಲುವಾಗಿ ನಾಗರೀಕ ಚಳುವಳಿ ಮೂಲಕ ಭಾರತೀಯ ಸಿರಿಧಾನ್ಯಗಳು ಹಾಗೂ ಇವುಗಳ ಆಧಾರಿತ ತಿಂಡಿ ತಿನಿಸು/ಖಾದ್ಯ/ಪಾನೀಯಗಳನ್ನು ದೇಶದಲ್ಲಿಯೇ ಅಲ್ಲದೇ ವಿಶ್ವದಾದ್ಯಂತ ಪರಿಚಯಿಸಬೇಕಾಗಿರುವ ಅವಶ್ಯಕತೆಯಿರುತ್ತದೆ.

ಸಿರಿಧಾನ್ಯ ಆಧಾರಿತ ತಿಂಡಿ ತಿನಿಸು/ಖಾದ್ಯ/ಪಾನೀಯಗಳು KMF ಸಂಸ್ಥೆಯ ನಂದಿನಿ Outlet (ಸಿರಿಧಾನ್ಯ ಮಾಲ್ಟ್, ಲಡ್ಡು, ಬರ್ಫಿ, ಬಿಸ್ಕೆತ್) , ರಾಜ್ಯದ ಎಲ್ಲಾ ಕೃಷಿ ಸಂಬಂಧಿತ ವಿಶ್ವ ವಿದ್ಯಾನಿಲಯಗಳ Food and Nutrition ವಿಭಾಗ, ಸ್ವಸಹಾಯ ಸಂಘಗಳು ಹಾಗೂ ರಾಜ್ಯದ 7 ಸಾವಯವ ರೈತರ ಪ್ರಾಂತೀಯ ಒಕ್ಕೂಟಗಳು, (ಒಕ್ಕೂಟಗಳ ಪಟ್ಟಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ) ಪ್ರಮುಖ ಪಟ್ಟಣಗಳ ಸೂಪರ್ ಮಾರುಕಟ್ಟೆಗಳು ಹಾಗೂ ನಿಯಮಿತವಾಗಿ ಆಯೋಜಿಸಲಾಗುವ ಸಾವಯವ ಸಂತೆಗಳಲ್ಲಿ ಲಭ್ಯವಿರುತ್ತವೆ.

ಅಂತರರಾಷ್ಟ್ರೀಯ ಸಿರಿಧಾನ್ಯಗಳ ವರ್ಷ 2023 ನ್ನು ಅರ್ಥಪೂರ್ಣವಾಗಿ ಆಚರಿಸಲು ರಾಜ್ಯದ ಎಲ್ಲಾ ಇಲಾಖೆಗಳು ಹಾಗೂ ಎಲ್ಲಾ ಅಧೀನ ಕಛೇರಿಗಳಲ್ಲಿ ಮತ್ತು ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್ ಇಲಾಖಾ ವತಿಯಿಂದ ಸಹ ಎಲ್ಲಾ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳಲ್ಲಿ ಆಯೋಜಿಸಲಾಗುವ ಎಲ್ಲಾ ಸಭೆ / ಸಮಾರಂಭಗಳಲ್ಲಿ ಸಿರಿಧಾನ್ಯ ಆಧಾರಿತ ತಿಂಡಿ ತಿನಿಸು/ಪಾನೀಯಗಳನ್ನು ಬಳಸುವಂತೆ ಈ ಮೂಲಕ ತಿಳಿಸಲಾಗಿದೆ.

ಸಾವಯವ ರೈತರ ಪ್ರಾಂತೀಯ ಒಕ್ಕೂಟಗಳ ಫೆಡರೇಶನ್‌ಗಳ ಪಟ್ಟಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ.

**(ಶಿವಯೋಗಿ ಸಿ. ಕಳಸದ,ಭಾ.ಆ.ಸೇ.)**
ಸರ್ಕಾರದ ಕಾರ್ಯದರ್ಶಿ,
ಕೃಷಿ ಇಲಾಖೆ

**ಪ್ರತಿ:**

ಸಂಕಲನಾಕಾರರು, ಸರ್ಕಾರಿ ಮುದ್ರಣಾಯ, ಕೆಂಗೇರಿ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಮುಂದಿನ ಗೆಜೆಟ್‌ನಲ್ಲಿ ಪ್ರಕಟಿಸುವಂತೆ ಹಾಗೂ ಈ ಇಲಾಖೆಗೆ 25 ಪ್ರತಿಗಳನ್ನು ಕಳುಹಿಸುವಂತೆ ತಿಳಿಸಿದೆ.

**ಇವರಿಗೆ,**

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ /ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
2. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ / ವಿಧಾನ ಪರಿಷತ್ತು ಸಚಿವಾಲಯ, ವಿಧಾನಸೌಧ.
3. ಎಲ್ಲಾ ಇಲಾಖಾ ಮುಖ್ಯಸ್ಥರು.
4. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು / ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು / ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
5. ಕಛೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಎಲ್ಲಾ ಸಚಿವರುಗಳ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

# ಅನುಬಂಧ :

## ಸಾವಯವ ರೈತರ ಪ್ರಾಂತೀಯ ಒಕ್ಕೂಟಗಳ ಫೆಡರೇಶನ್‌ಗಳ ಪಟ್ಟಿ.

| ಕ್ರ.ಸಂ | ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ವಿವರಗಳು |
|---|---|
| 1 | ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ<br>ಅಧ್ಯಕ್ಷರು : ಶ್ರಿಯುತ ಕೃಪ<br>ದೂರವಾಣಿ ಸಂಖ್ಯೆ: 9945425506<br>ಸಿ.ಇ.ಒ : ಕರಿಯಪ್ಪ<br>ದೂರವಾಣಿ ಸಂಖ್ಯೆ: 9008524914<br>ಇ-ಮೇಲ್: omfdavanagere@gmail.com |
| 2 | ಮೈಸೂರು, ಚಾಮರಾಜನಗರ ಮತ್ತು ಮಂಡ್ಯ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ ನಿತಮಿತ<br>ಅಧ್ಯಕ್ಷರು : ಶ್ರಿಯುತ ಪಿ.ರಮೇಶ್<br>ದೂರವಾಣಿ ಸಂಖ್ಯೆ: 9964405229<br>ಸಿ.ಇ.ಒ : ಪ್ರಮೋದ್<br>ದೂರವಾಣಿ ಸಂಖ್ಯೆ: 9035565478<br>ಇ-ಮೇಲ್: omfmyscmgmdy@gmail.com |
| 3 | ತುಮಕೂರು ಜಿಲ್ಲಾ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ<br>ಅಧ್ಯಕ್ಷರು : ಶ್ರಿಯುತ ಗೋವಿಂದರಾಜು,<br>ದೂರವಾಣಿ ಸಂಖ್ಯೆ: 9880472455<br>ಸಿ.ಇ.ಒ : ಮಧು.ಆರ್ .ಕೆ<br>ದೂರವಾಣಿ ಸಂಖ್ಯೆ: 9449440201<br>ಇ-ಮೇಲ್: omftumkur@gmail.com |
| 4 | ಉತ್ತರಕನ್ನಡ ಜಿಲ್ಲಾ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ<br>ಅಧ್ಯಕ್ಷರು : ಶ್ರಿಯುತ ವಿಶ್ವನಾಥ್ ಭಟ್ ದೂರವಾಣಿ ಸಂಖ್ಯೆ: 9242185319<br>ಸಿ.ಇ.ಒ : ವಿಕಾಸ್ ಹೆಗ್ಡೆ<br>ದೂರವಾಣಿ ಸಂಖ್ಯೆ: 8277227228/9110401920<br>ಇ-ಮೇಲ್: orgfeduk@gmail.com |

| | |
|---|---|
| 5 | ವಿಜಯಪುರ ಜಿಲ್ಲಾ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ<br>ಅಧ್ಯಕ್ಷರು : ಶ್ರೀಯುತ ಮಹದೇವ್ ಅಂಬ್ಲಿ<br>ದೂರವಾಣಿ ಸಂಖ್ಯೆ: 9880247148<br>ಸಿ.ಇ.ಒ : ಮಹದೇವ್ ಅಂಬ್ಲಿ<br>ದೂರವಾಣಿ ಸಂಖ್ಯೆ: 7090459676<br>ಇ-ಮೇಲ್: vijayapurfederation2018@gmail.com |
| 6 | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ<br>ಅಧ್ಯಕ್ಷರು : ಶ್ರೀಯುತ ಕೆ.ವಿ. ರೆಡ್ಡೆಪ್ಪ<br>ದೂರವಾಣಿ ಸಂಖ್ಯೆ: 9483050005<br>ಸಿ.ಇ.ಒ : ಸುನಿಲ್.ಕೆ.ಎನ್<br>ದೂರವಾಣಿ ಸಂಖ್ಯೆ: 8197543534<br>ಇ-ಮೇಲ್: Omfklrcbp2@gmail.com reddappakv1968@gmail.com |
| 7 | ದಕ್ಷಿಣಕನ್ನಡ, ಚಿಕ್ಕಮಗಳೂರು ಮತ್ತು ಉಡುಪಿ ಜಿಲ್ಲೆಗಳ ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟ<br>ಅಧ್ಯಕ್ಷರು : ಶ್ರೀಯುತ ಕೃಪ ದೂರವಾಣಿ ಸಂಖ್ಯೆ: 9900366533<br>ಸಿ.ಇ.ಒ : ಮಂಜುನಾಥ್<br>ದೂರವಾಣಿ ಸಂಖ್ಯೆ: 7022299702<br>ಇ-ಮೇಲ್: omfdkckmudupi@gmail.com |